# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 136 (266) |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 16.07.2024 |
| ಉತ್ತರಿಸಬೇಕಾದವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ನಗರಾಬಿವೃದ್ಧಿ ಪ್ರಾಧಿಕಾರಿಗಳ ನೌಕರರುಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಸರ್ಕಾರ ಚಿಂತಿಸಿದೆಯೇ; | ಹೌದು |
| ಆ) | ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ 1987ರಂತೆ ಪ್ರಾಧಿಕಾರಗಳಲ್ಲಿ ಖಾಯಂ ಕರ್ತವ್ಯನಿರತ ನೌಕರರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮದಲ್ಲಿ ಮುಂಬಡ್ತಿಯಿಲ್ಲದೆ ಮತ್ತು ವರ್ಗಾವಣೆಯಿಲ್ಲದೆ ಪ್ರಾಧಿಕಾರಗಳಲ್ಲೇ ಕರ್ತವ್ಯ ನಿರ್ವಹಿಸುತ್ತಾ ಅಲ್ಲಿಯೇ ನಿವೃತ್ತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ರಾಜ್ಯದ ಕೆಲವೊಂದು ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಪ್ರತ್ಯೇಕವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದ್ದು, ಸದರಿ ವೃಂದ ಮತ್ತು ನೇಮಕಾತಿ ಹೊಂದಿ ಹಾಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಅಡಿಯಲ್ಲಿ ಮುಂಬಡ್ತಿ ನೀಡಲು ಅವಕಾಶವಿರುತ್ತದೆ.<br><br>ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 66 ರ ಅಡಿಯಲ್ಲಿ ರಾಜ್ಯ ಸರ್ಕಾರವು ಯಾವುದೇ ಅಧಿಕಾರಿ / ಸಿಬ್ಬಂದಿಯನ್ನು ಒಂದು ನಗರಾಭಿವೃದ್ಧಿ ಪ್ರಾಧಿಕಾರದಿಂದ ಇನ್ನೊಂದು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ವರ್ಗಾಯಿಸಬಹುದಾಗಿದೆ. |
| ಇ) | ಈ ಹಿಂದೆ ದಿನಾಂಕ: 15.03.2022 ರಂದು ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕರೂಪದ ಸಮಿತಿ ರಚಿಸಿ ಮುಂದಿನ ಆರು ತಿಂಗಳ ಒಳಗಾಗಿ ಸರ್ಕಾರದ ಅನುಮೋದನೆ ನೀಡಿ ಅಳವಡಿಸಿಕೊಳ್ಳುಗುವುದೆಂದು ಕಳೆದ ಅಧಿವೇಶನದಲ್ಲಿ ಭರವಸೆ ನೀಡಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು? | ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕ ರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ: ನಅಇ 21 ಅಪ್ರಾಸೇ 2014, ದಿನಾಂಕ:11.10.2022 ರಲ್ಲಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಲಾಗಿತ್ತು. ಸಮಿತಿಯಿಂದ ವರದಿ ಸ್ವೀಕೃತಗೊಂಡಿರುತ್ತದೆ.<br><br>ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕ ರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸುವ ಕುರಿತು ಪ್ರಾಧಿಕಾರಗಳ ಅಧಿಕಾರಿ / ನೌಕರರಗಳ ನೇಮಕಾತಿ ವಿಧಾನ, ಸೇವಾ ಅರ್ಹತೆ ಷರತ್ತು ಮುಂತಾದವುಗಳು ಅನ್ವಯವಾಗುವಂತೆ |

| | | |
|---|---|---|
| | | ನಿಯಮಗಳನ್ನು ರಚಿಸಲು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರಲ್ಲಿ ಅವಕಾಶ ಕಲ್ಪಿಸಲು ಸೂಕ್ತ ತಿದ್ದುಪಡಿ ಮಾಡುವ ಸಂಬಂಧ ಕರಡು ವಿಧೇಯಕವನ್ನು ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಇಲಾಖೆ ರವರು ಪರಿಶೋಧಿಸಿ ಸಲ್ಲಿಸಿದ್ದು, ಸದರಿ ವಿಧೇಯಕವನ್ನು ಮಾನ್ಯ ಕಾನೂನು ಸಚಿವರ ಅಧ್ಯಕ್ಷತೆಯ ಪರಿಶೀಲನಾ ಸಮಿತಿಯ ಮುಂದೆ ಮಂಡಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಅನುಮೋದನೆ ಹಾಗೂ ಆರ್ಥಿಕ ಇಲಾಖೆ, ಕಾನೂನು ಇಲಾಖೆಗಳ ಅಭಿಪ್ರಾಯ ಪಡೆಯಲು ಕ್ರಮವಹಿಸಲಾಗುತ್ತಿದೆ.<br><br>ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿ ಕರಡು ನಿಯಮಗಳಿಗೆ ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಇಲಾಖೆ, ಆರ್ಥಿಕ ಇಲಾಖೆ, ಕಾನೂನು ಇಲಾಖೆ ಮತ್ತು ಸಿ.ಆ.ಸು.ಇಲಾಖೆಗಳ ಅಭಿಪ್ರಾಯ ಪಡೆಯಲು ಕ್ರಮವಹಿಸಲಾಗುತ್ತಿರುವುದರಿಂದ ಸದರಿ ಇಲಾಖೆಗಳಿಂದ ಅಭಿಪ್ರಾಯ ಸ್ವೀಕೃತಗೊಂಡ ನಂತರ ನಿಯಮಾನುಸಾರ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಕ್ರಮವಹಿಸಲಾಗುವುದು. |

**ಸಂಖ್ಯೆ: ನಅಇ 37 ಎಲ್‌ಸಿಕ್ಯೂ 2024(ಇ-ಕಡತ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು